**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

**ಪ್ರಶ್ನೆ:**

ಶತಮಾನಗಳಷ್ಟು ಹಳೆಯ ಮೈಸೂರು ವಿಶ್ವವಿದ್ಯಾಲಯವು ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿದ್ದು ನಿವೃತ್ತ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಪಿಂಚಣಿ ಪಡೆಯಲು ಹೆಣಗಾಡುತ್ತಿರುವ ವಿಷಯ ದಿನಾಂಕ 17-08-2025ರ ಪ್ರತಿನಿಧಿ ಪತ್ರಿಕೆಯಲ್ಲಿ 'ಮೈಸೂರು ವಿವಿಯಲ್ಲಿ ಆರ್ಥಿಕ ಬಿಕ್ಕಟ್ಟು: ಪಿಂಚಣಿಗಾಗಿ ಅಲೆದಾಟ" ಶೀರ್ಷಿಕೆಯಡಿ ಪ್ರಕಟವಾಗಿರುತ್ತದೆ.

ಮಂಡ್ಯ ಮತ್ತು ಚಾಮರಾಜನಗರವನ್ನು ಪ್ರತ್ಯೇಕ ವಿಶ್ವವಿದ್ಯಾಲಯಗಳಾಗಿ ವಿಂಗಡಿಸಿದಾಗಿನಿಂದ, ಸ್ನಾತಕೋತ್ತರ ಕೋರ್ಸ್‌ಗಳ ಕಾಲೇಜುಗಳಾಗಿ ವಿಭಜಿಸಲಾಗಿದ್ದು, ಹೀಗಾಗಿ ಮೈಸೂರು ವಿಶ್ವವಿದ್ಯಾಲಯಕ್ಕೆ ಹಣ ಒದಗಿಸಲು ಸಾಧ್ಯವಾಗಿಲ್ಲ ಎನ್ನುವುದು ತಿಳಿದುಬಂದಿರುತ್ತದೆ. ಮೈಸೂರು ವಿಶ್ವವಿದ್ಯಾಲಯಕ್ಕೆ 2025-26ರ ಬಜೆಟ್ ಅಂದಾಜಿನಲ್ಲಿ ಸರ್ಕಾರಕ್ಕೆ ಪಿಂಚಣಿ ಅನುದಾನವಾಗಿ ರೂ. 157.54 ಕೋಟಿಗಳ ಬೇಡಿಕೆ ಇಡಲಾಗಿತ್ತು. ಆದರೆ 'ಸರ್ಕಾರ 60 ಕೋಟಿಗಳನ್ನು ಮಂಜೂರು ಮಾಡಿದೆ. ಇದರಿಂದಾಗಿ ವಿವಿಗೆ ದೊಡ್ಡ ಹಣಕಾಸು ಕೊರತೆ ಎದುರಾಗಿದೆ. ಇದುವರೆಗೂ ನಿಯಮಿತವಾಗಿ ಪಿಂಚಣಿ ಪಾವತಿಸುತ್ತಿದ್ದ ವಿಶ್ವವಿದ್ಯಾಲಯವು ಕಳೆದ ಏಪ್ರಿಲ್‌ನಲ್ಲಿ ಒಂದು ವಾರ ವಿಳಂಬ ಮಾಡಿತ್ತು. ಆದರೆ ಪ್ರಸ್ತುತ ಆಗಸ್ಟ್ 15 ಕಳೆದರೂ ಇದುವರೆಗೂ ಪಿಂಚಣಿ ಬಿಡುಗಡೆ ಮಾಡಿಲ್ಲವೆಂದು ನಿವೃತ್ತ ಪಿಂಚಣಿದಾರರು ತಮ್ಮ ಅಳಲನ್ನು ತೋಡಿಕೊಂಡಿದ್ದು, ಸರ್ಕಾರ ಈ ವಿಚಾರದಲ್ಲಿ ಮಧ್ಯಪ್ರವೇಶಿಸುವಂತೆ ಒತ್ತಾಯಿಸಿದ್ದಾರೆ.

ಒಂದು ಕಡೆ ರಾಜ್ಯದಲ್ಲಿರುವ ಎಲ್ಲ ವಿಶ್ವವಿದ್ಯಾಲಯಗಳು ನಿವೃತ್ತರ ಪಿಂಚಣಿ ಪಾವತಿಸಲು ತಮ್ಮದೇ ಆದ ಆದಾಯವನ್ನು ಗಳಿಸಬೇಕು ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಇದರ ಜೊತೆಗೆ ಹೆಚ್ಚುವರಿ ಬೋಧಕೇತರ ಸಿಬ್ಬಂದಿ ನೇಮಕಾತಿಯು ಆರ್ಥಿಕ ಅವ್ಯವಸ್ಥೆಗೆ ಒಂದು ಕಾರಣ ಎಂದು ಮೂಲಗಳು ತಿಳಿಸಿವೆ. ಮೈಸೂರು ವಿಶ್ವವಿದ್ಯಾನಿಲಯವು ಈ ಬಿಕ್ಕಟ್ಟಿನಿಂದ ಹೊರಬರಲು ರಾಜ್ಯ ಸರ್ಕಾರ ಹಣ ಬಿಡುಗಡೆ ಮಾಡುವುದೊಂದೇ ಮಾರ್ಗವಾಗಿದ್ದು, ಮೈಸೂರು ವಿಶ್ವವಿದ್ಯಾಲಯವನ್ನು ಮೂರು ವಿಶ್ವವಿದ್ಯಾಲಯಗಳಾಗಿ ವಿಭಜಿಸಿದ್ದೇ ಈ ಪರಿಸ್ಥಿತಿಗೆ ಕಾರಣವೂ ಆಗಿದೆ ಎನ್ನುವುದು ತಜ್ಞರ ಅಭಿಪ್ರಾಯವಾಗಿದೆ. ದಯಮಾಡಿ, ಸರ್ಕಾರ ನಿವೃತ್ತ ಬೋಧಕ ಮತ್ತು ಬೋಧಕೇತರರ ಪಿಂಚಣಿಯನ್ನು ಪ್ರತಿ ತಿಂಗಳು ಪಾವತಿಸಲು ಅಗತ್ಯವಿರುವ ಅನುದಾನವನ್ನು ಕೂಡಲೇ ಬಿಡುಗಡೆ ಮಾಡಬೇಕಾಗಿ ಶೂನ್ಯವೇಳೆಯಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರನ್ನು ಒತ್ತಾಯಿಸುತ್ತೇನೆ.

**ಉತ್ತರ:**

2022-23 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿನ ಕಂಡಿಕೆ 103 ರ ಘೋಷಣೆಯನುಸಾರ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ, ಯೋಜನಾ ಇಲಾಖೆ ಹಾಗೂ ಆರ್ಥಿಕ ಇಲಾಖೆಗಳ ಅಭಿಪ್ರಾಯದನ್ವಯ ರಾಜ್ಯದಲ್ಲಿ ನೂತನವಾಗಿ 07 ಹೊಸ ವಿಶ್ವವಿದ್ಯಾಲಯಗಳನ್ನು 2023ರಲ್ಲಿ ಸ್ಥಾಪನೆ ಮಾಡಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ಕ್ಕೆ ತಿದ್ದುಪಡಿ ಮಾಡುವುದರ ಮೂಲಕ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2022 ಅನ್ನು ಜಾರಿಗೆ ತರಲಾಗಿರುತ್ತದೆ.

ಅದರನ್ವಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಯಲ್ಲಿದ್ದ ಸ್ನಾತಕೋತ್ತರ ಕೇಂದ್ರಗಳನ್ನು ಮೈಸೂರು ವಿಶ್ವವಿದ್ಯಾಲಯದಿಂದ ಬೇರ್ಪಡಿಸಿ ಕೆಲವು ಷರತ್ತುಗಳೊಂದಿಗೆ ಹಾಸನ ವಿಶ್ವವಿದ್ಯಾಲಯ ಮತ್ತು ಚಾಮರಾಜನಗರ ವಿಶ್ವವಿದ್ಯಾಲಯವೆಂದು ಸ್ಥಾಪಿಸಲಾಗಿರುತ್ತದೆ.

ಮೈಸೂರು ವಿಶ್ವವಿದ್ಯಾಲಯದಿಂದ ಹಾಸನ ಮತ್ತು ಚಾಮರಾಜನಗರ ವಿಶ್ವವಿದ್ಯಾಲಯಗಳಿಗೆ ವರ್ಗಾಯಿಸಲ್ಪಟ್ಟ ಜಮೀನು, ಸಂಯೋಜಿತ ಕಾಲೇಜುಗಳು ಹಾಗೂ ಬೋಧಕ /ಬೋಧಕೇತರ ಹುದ್ದೆಗಳ ವಿವರ ಈ ಕೆಳಕಂಡಂತಿದೆ;

| Sl. No. | University | ಜಮೀನಿನ ವಿವರ (ಎಕರೆ) | ಸಂಯೋಜಿತ ಕಾಲೇಜುಗಳ ಸಂಖ್ಯೆ | ಮಾತೃ ವಿವಿಗಳಿಂದ ವರ್ಗಾವಣೆ ಮಾಡಲಾದ ಬೋಧಕ/ಬಬೋಧಕೇತರ ಹುದ್ದೆಗಳ ವಿವರ | |
|---|---|---|---|---|---|
| | | | | ಬೋಧಕ | ಬೋಧಕೇತರ |
| 1 | ಹಾಸನ ವಿವಿ | 78.08 | 54 | 27 | 245 |
| 2 | ಚಾಮರಾಜನಗರ ವಿವಿ | 54.03 | 19 | 36 | 90 |

ಕಳೆದ 03 ವರ್ಷಗಳಲ್ಲಿ ಮೈಸೂರು ವಿಶ್ವವಿದ್ಯಾಲಯಕ್ಕೆ ವೇತನ, ಪಿಂಚಣಿ ಮತ್ತು ಅಭಿವೃದ್ಧಿಗಾಗಿ ಸರ್ಕಾರದಿಂದ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

(ರೂ. ಲಕ್ಷಗಳಲ್ಲಿ)

| ಮೈಸೂರು ವಿಶ್ವವಿದ್ಯಾನಿಲಯ - 2202-03-102-0-01 | | | |
|---|---|---|---|
| ಆರ್ಥಿಕ ವರ್ಷ | ವೇತನಕ್ಕಾಗಿ | ಪಿಂಚಣಿಗಾಗಿ | ಸಹಾಯಾನುದಾನ ಸಾಮಾನ್ಯ/ಅಭಿವೃದ್ಧಿ |
| 2023-24 | 11763.22 | 5000.00 | 50.00 |
| 2024-25 | 12178.60 | 5000.00 | 100.00 |
| 2025-26 | 12768.71 | 5000.00 | - |

ಪ್ರಸ್ತುತ ಮೈಸೂರು ವಿಶ್ವವಿದ್ಯಾಲಯದಲ್ಲಿ ಬೋಧಕ-ಬೋಧಕೇತರ ಹುದ್ದೆಗಳು ಖಾಲಿಯಿದ್ದು, ಸದರಿ ಹುದ್ದೆಗಳನ್ನು ಮೈಸೂರು ವಿಶ್ವವಿದ್ಯಾಲಯವು ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಂಡು ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನದಲ್ಲಿದ್ದು, ಮೈಸೂರು ವಿಶ್ವವಿದ್ಯಾಲಯವನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ. 13.02.2025 ಮತ್ತು 09.05.2025ರಂದು ಸಭೆಗಳನ್ನು ನಡೆಸಿದ್ದು, ಸದರಿ ಸಭೆಯು ಇಲ್ಲಿಯವರೆಗೂ ಶಿಫಾರಸ್ಸುಗಳನ್ನು ನೀಡಿರುವುದಿಲ್ಲ. ಸದರಿ ಸಮಿತಿಯು ನೀಡುವ ಶಿಫಾರಸ್ಸುಗಳನ್ನು ಪರಿಶೀಲಿಸಿ, ಸಚಿವ ಸಂಪುಟದ ಮುಂದೆ ಮಂಡಿಸಿ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು ಶೈಕ್ಷಣಿಕವಾಗಿ ಹಾಗೂ ಆಡಳಿತಾತ್ಮಕವಾಗಿ ಸದೃಢಗೊಳ್ಳಲು ಅಗತ್ಯ ಕ್ರಮವನ್ನು ಕೈಗೊಳ್ಳಲಾಗುತ್ತದೆ.

**ಸಂಖ್ಯೆ:** ಇಡಿ 111 ಯುಎಂವಿ 2025

(ಡಾ: ಎಂ.ಸಿ. ಸುಧಾಕರ್)

ಉನ್ನತ ಶಿಕ್ಷಣ, ಸಚಿವರು